**All India Radio: Bangalore**
**Regional Bulletin In Kannada**
**29.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.05.2025 / 2.30 p.m.**
**<><><><>**

ಮುಖ್ಯಾಂಶಗಳು

1. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಗಲಭೆ ಮರುಕಳಿಸಿದರೆ ಕಠಿಣ ಕ್ರಮ ; ಸರ್ಕಾರ ಎಚ್ಚರಿಕೆ
2. ಇಂದಿನಿಂದ ದೇಶಾದ್ಯಂತ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ; ರಾಜ್ಯದಲ್ಲೂ ವಿಜ್ಞಾನಿಗಳಿಂದ ರೈತರಿಗೆ ಸಲಹೆ
3. ರಾಜ್ಯದಲ್ಲಿ ಇಂದಿನಿಂದ ಶೈಕ್ಷಣಿಕ ವರ್ಷ ಆರಂಭ ; ಬೆಂಗಳೂರಿನಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿದ ಮುಖ್ಯಮಂತ್ರಿ
4. ರಾಜ್ಯದ ಹಲವೆಡೆ ಮುಂದುವರೆದ ಮಳೆ ; ಕೊಡಗು, ಕರಾವಳಿ ಜಿಲ್ಲೆಗಳಲ್ಲಿ ರೆಡ್ ಅಲರ್ಟ್

<><><><>

ಕೋಮು ಗಲಭೆಗಳನ್ನು ಉಂಟುಮಾಡುವವರು ಎಷ್ಟೇ ಪ್ರಭಾವಿಗಳಾಗಿದ್ದರೂ ಕಾನೂನಿನ ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರೊಂದಿಗೆ ಚರ್ಚಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರೂ ಕಾನೂನಿಗಿಂತ ದೊಡ್ಡವರಲ್ಲ ಎಂದು ಹೇಳಿದ್ದಾರೆ. ಮಂಗಳೂರಿನಲ್ಲಿ ಸೌಹಾರ್ದತೆ ನೆಲೆಸಬೇಕು, ದ್ವೇಷ ಯಾವುದೇ ಕಾರಣಕ್ಕೂ ಇರಬಾರದು ಎಂದು ತಿಳಿಸಿದ್ದಾರೆ. ಇದೇ ವೇಳೆ ನಾಳೆ ಮತ್ತು ನಾಡಿದ್ದು ಮಳೆ ಹಾನಿ ಕುರಿತಂತೆ ಎಲ್ಲ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳೊಂದಿಗೆ ಚರ್ಚೆ ನಡೆಸುವುದಾಗಿ ತಿಳಿಸಿದ್ದಾರೆ.

**ಧ್ವನಿ : ಸಿದ್ದರಾಮಯ್ಯ**

<><><><>

ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳನ್ನು ಸೂಕ್ಷ್ಮ ಪ್ರದೇಶಗಳಾಗಿ ಪರಿಗಣಿಸಿ, ಸರ್ಕಾರ ಕ್ರಮ ತೆಗೆದುಕೊಳ್ಳಲಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರಿನಲ್ಲಿ ನಡೆದ ಘಟನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಯಾವುದೇ ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳಲಾಗುವುದು. ಪದೇ ಪದೇ ಈ ರೀತಿ ಆಗುತ್ತಿದ್ದರೆ ಸುಮ್ಮನೆ ಕೂರಲು ಆಗುವುದಿಲ್ಲ. ಕಾನೂನನ್ನು ಮತ್ತಷ್ಟು ಬಿಗಿ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಕಳೆದ ಬಾರಿ ಘಟನೆ ನಡೆದಾಗ ಪರಿಸ್ಥಿತಿ ಅರ್ಥೈಸಿಕೊಂಡು, ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ರಚಿಸಲು ತಕ್ಷಣ ಜಾರಿಗೆ ಬರುವ ನಿಟ್ಟಿನಲ್ಲಿ ಸರ್ಕಾರ ಆದೇಶ ಹೊರಡಿಸಿದೆ. ಈ ಬಗ್ಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಕ್ರಮ ತೆಗೆದುಕೊಳ್ಳಲಿದೆ. ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಜಿಲ್ಲೆಗಳನ್ನು ಸೂಕ್ಷ್ಮ ಪ್ರದೇಶಗಳಾಗಿ ಪರಿಗಣಿಸಿ, ಕೋಮು ಹಿಂಸೆಯನ್ನು ಹತ್ತಿಕ್ಕಲು, ಸರ್ಕಾರ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

’ವಿಕಸಿತ ಕೃಷಿ ಸಂಕಲ್ಪ ಅಭಿಯಾನ’ ಎಂದರೆ ವಿಜ್ಞಾನಿಗಳು ಪ್ರಯೋಗಾಲಯ ಬಿಟ್ಟು ರೈತರ ನಡುವೆ ಹೊಲಗಳಿಗೆ ಹೋಗಬೇಕು. ಹಳ್ಳಿಯಲ್ಲಿ ರೈತರೊಂದಿಗೆ ಕುಳಿತು ಚರ್ಚಿಸಬೇಕು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಒಡಿಶಾದ ಪುರಿಯಲ್ಲಿ ’ವಿಕಸಿತ ಕೃಷಿ ಸಂಕಲ್ಪ ಅಭಿಯಾನ’ ಚಾಲನೆ ನೀಡಿ ಮಾತನಾಡಿದ ಅವರು ಇಂದಿನಿಂದ ಎಲ್ಲಾ ವಿಜ್ಞಾನಿಗಳು ಪ್ರಯೋಗಾಲಯ ಬಿಟ್ಟು ಗ್ರಾಮಕ್ಕೆ ಬರುತ್ತಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ದಾವಣಗೆರೆ ಜಿಲ್ಲೆಯ ದಾವಣಗೆರೆ ತಾಲ್ಲೂಕಿನ ಆನಗೋಡು, ಅಗಸನಕಟ್ಟೆ ಸಿದ್ದನೂರು, ಹೊನ್ನಾಳಿ ತಾಲೂಕಿನ ಕುಂದೂರು, ಯಕ್ಕನಹಳ್ಳಿ, ಕೂಲಂಬಿ ಗ್ರಾಮಗಳಲ್ಲಿ ಅಭಿಯಾನ ನಡೆಯಿತು. ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ.ಟಿ.ಎನ್.ದೇವರಾಜ್, ಡಾ.ಬಸವನಗೌಡ, ಮಲ್ಲಿಕಾರ್ಜುನ್, ಬಿ.ಶಿವಕುಮಾರ್, ಡಾ.ಅನಿಲ್ ಕುಮಾರ್ ಅವರು ರೈತರಿಗೆ ಸಲಹೆ ನೀಡಿದರು. ಅಭಿಯಾನದಲ್ಲಿ ಮಣ್ಣಿನ ಆರೋಗ್ಯ, ನೀರಿನ ಸಂರಕ್ಷಣೆ,

ಬೀಜೋಪಚಾರ ಬಗ್ಗೆ ಸಲಹೆ ನೀಡಲಾಯಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರ ಹಾಗೂ ಭಾರತೀಯ ಕೃಷಿ ಅನುಸಂಧಾನ ಪರಿಷತ್ ವತಿಯಿಂದ 'ಕೃಷಿ ವಿಜ್ಞಾನಿಗಳ ನಡೆ - ರೈತರ ಕಡೆ' ಧ್ಯೇಯೋದ್ದೇಶದ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ ದೊರೆಯಿತು. ದೊಡ್ಡಬಳ್ಳಾಪುರ ತಾಲೂಕಿನ ಹಾಡೋನಹಳ್ಳಿಯಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ರಥಯಾತ್ರೆಗೆ ಬೆಂಗಳೂರಿನ ರಾಷ್ಟ್ರೀಯ ಡೈರಿ ಸಂಶೋಧನಾ ಸಂಸ್ಥೆಯ ಮುಖ್ಯಸ್ಥ ಡಾ. ಅರಿಂದಾಮ್ ಡಾಲಿ ಚಾಲನೆ ನೀಡಿದರು. ಆಕಾಶವಾಣಿಯೊಂದಿಗೆ ಮಾತನಾಡಿದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಬಿ.ಜಿ.ಹನುಮಂತರಾಯ ಇಂದಿನಿಂದ ಎಲ್ಲಾ ವಿಜ್ಞಾನಿಗಳು ರೈತರೊಂದಿಗೆ ಇದ್ದು, ಕೃಷಿ ಚಟುವಟಿಕೆಗೆ ಸಹಕಾರ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

**ಧ್ವನಿ : ಡಾ.ಬಿ.ಜಿ.ಹನುಮಂತರಾಯ**

<><><><>

ಪ್ರತಿಭೆ ಯಾರ ಸ್ವತ್ತು ಇಲ್ಲ, ಅವಕಾಶ ಸಿಕ್ಕಿದರೆ ಎಲ್ಲರ ಪ್ರತಿಭೆಯೂ ಹೊರ ಹೊಮ್ಮುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಶಾಲಾ ಶೈಕ್ಷಣಿಕ ವರ್ಷದ ಪುನರರಾಂಭದ ಪ್ರಯುಕ್ತ ಬೆಂಗಳೂರಿನ ಆಡುಗೋಡಿಯ ಕರ್ನಾಟಕ ಸರ್ಕಾರಿ ಕನ್ನಡ ಪ್ರೌಢ ಶಾಲೆಯಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು. ಜಾತಿ ವರ್ಗ ಮುಕ್ತ ಸಮ-ಸಮಾಜ ನಿರ್ಮಾಣವಾಗಬೇಕು ಎನ್ನುವುದು ಅಂಬೇಡ್ಕರ್ ಅವರ ಆಶ್ರಯವಾಗಿತ್ತು. ಅಂಬೇಡ್ಕರ್ ಅವರು ನೀಡಿದ ಸಂವಿಧಾನವನ್ನು ಎಲ್ಲರೂ ಪಾಲಿಸಬೇಕು ಎಂದು ಮುಖ್ಯಮಂತ್ರಿ ತಿಳಿಸಿದರು. ಮಕ್ಕಳಿಗೆ ಉತ್ತಮ ಪೌಷ್ಠಿಕಾಂಶ ಸಿಕ್ಕರೆ ಮಾತ್ರ ಉತ್ತಮ ವಿದ್ಯಾರ್ಥಿಗಳಾಗಿ ಓದಲು ಸಾಧ್ಯ. ಈ ಕಾರಣಕ್ಕೆ ಸರ್ಕಾರ ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು, ಚಿಕ್ಕಿ, ಹಾಲು ನೀಡುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಶಿಕ್ಷಣ ಸಚಿವ ಮಧುಬಂಗಾರಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ದೇಶದ ೨೨ ಪ್ರಾದೇಶಿಕ ಭಾಷೆಗಳ ನಡುವೆ ಸಮನ್ವಯ ರೂಪಿಸಿ ಸಂವಾದ ಏರ್ಪಡಿಸುವ ಉದ್ದೇಶದಿಂದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಡಿಜಿಟಲ್ ಇಂಡಿಯಾ ಭಾಷಿಣಿ ಎಂಬ ವಿನೂತನ ಪ್ರಯೋಗವನ್ನು ಆರಂಭಿಸಿದೆ. ಈ ಉಪಕ್ರಮಕ್ಕೆ ಯುವ ಇಂಜಿನಿಯರ್‌ಗಳನ್ನು ಆಕರ್ಷಿಸಲು ಸಚಿವಾಲಯದ ಭಾಷಿಣಿ ವಿಭಾಗ ಬೆಂಗಳೂರಿನಲ್ಲಿ ಭಾಷಿಣಿ ಹ್ಯಾಕಾಥಾನ್ ಕಾರ್ಯಾಗಾರವನ್ನು ಏರ್ಪಡಿಸಿತು. ಭಾಷಿಣಿ ಮೊಬೈಲ್ ಆಪ್ ಬಳಸುವ ಮೂಲಕ ೨೨ ಪ್ರಾದೇಶಿಕ ಭಾಷೆಗಳ ನಡುವೆ ಅನುವಾದ ಮತ್ತು ಬರಹದಿಂದ ಮತ್ತೊಂದು ಭಾಷೆಯ ಬರಹಕ್ಕೆ ಹಾಗೂ ಬರೆದ ವಾಕ್ಯಗಳನ್ನು ಧ್ವನಿ ರೂಪದಲ್ಲಿ ಕೇಳಿಸಿಕೊಳ್ಳುವ ಸೌಲಭ್ಯವನ್ನು ಈ ಆಪ್ ಹೊಂದಲಿದೆ. ಇದಕ್ಕಾಗಿ ಯುವ ಇಂಜಿನಿಯರ್ಸ್‌ಗಳು ಹೊಸ ತಂತ್ರಜ್ಞಾನ ರೂಪಿಸಿ ಕೊಡುವಂತೆ ಡಿಜಿಟಲ್ ಇಂಡಿಯಾ ಭಾಷಿಣಿ ವಿಭಾಗ ಆಹ್ವಾನ ನೀಡಿದೆ. ಯೋಗ್ಯ ಯೋಜನೆಗಳಿಗೆ ಮೂರು ಕೋಟಿವರೆಗೂ ಪ್ರೋತ್ಸಾಹ ಧನವನ್ನು ಇಡಲಾಗಿದೆ. ಡಿಜಿಟಲ್ ಇಂಡಿಯಾ ಭಾಷಿಣಿ ವಿಭಾಗದ ಸಹಯೋಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಟೊರೆಂಟೊ ತಂತ್ರಜ್ಞಾನ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ವಿಜಯ್‌ಪ್ರಸಾದ್ ಸುಂಕೇಶ್ವರಿ ಆಕಾಶವಾಣಿಯೊಂದಿಗೆ ಮಾತನಾಡಿ ಮಾಹಿತಿ ನೀಡಿದ್ದಾರೆ.

**ಧ್ವನಿ : ವಿಜಯ್‌ಪ್ರಸಾದ್ ಸುಂಕೇಶ್ವರಿ**

<><><><>

ರಾಜ್ಯಾದ್ಯಂತ ಮಳೆ ಮುಂದುವರೆದಿದೆ. ಕೊಡಗು ಜಿಲ್ಲೆಯಲ್ಲಿ ಸತತ ೭ ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಸಾಮಾನ್ಯ ಜನಜೀವನ ಸಂಪೂರ್ಣ ವ್ಯತ್ಯಯಗೊಂಡಿದೆ. ನಾಳೆಯವರೆಗೂ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಶಾಲೆಗಳ ಪುನರಾರಂಭವನ್ನು ಶನಿವಾರದವರೆಗೆ ಮುಂದೂಡಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದು ಕೆಲವು ಹಳ್ಳಿಗಳಿಗೆ ಕಳೆದ ೧ ವಾರದಿಂದಲೂ ವಿದ್ಯುತ್ ಇಲ್ಲದೆ ಕಗ್ಗತ್ತಲಲ್ಲಿರುವಂತಾಗಿದೆ. ತೀವ್ರ ಗಾಳಿಯಿಂದಾಗಿ ಅನೇಕ ಕಡೆಗಳಲ್ಲಿ ವಿದ್ಯುತ್ ಕಂಬಗಳು ಧರೆಗುರುಳುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿವೆ. ಚೆಸ್ಕಾಂ ಸಿಬ್ಬಂದಿ ಸಮಾರೋಪಾದಿಯಲ್ಲಿ ವಿದ್ಯುತ್ ಸಂಪರ್ಕ ಮರುಕಲ್ಪಿಸಲು ಮುಂದಾಗಿದ್ದಾರೆ. ದುಬಾರೆ ಸಾಕಾನೆ ಶಿಬಿರಕ್ಕೆ ಪ್ರವಾಸಿಗರ ಭೇಟಿಯನ್ನು ನಿರ್ಬಂಧಿಸಲಾಗಿದೆ.

ಕಾವೇರಿ ನದಿಯಲ್ಲಿ ನೀರಿನ ಹರಿವು ತೀವ್ರ ಹೆಚ್ಚಳವಾಗಿರುವ ಹಿನ್ನಲೆಯಲ್ಲಿ ಸಾಕಾನೆ ಶಿಬಿರಕ್ಕೆ ಕಾವೇರಿ ನದಿ ದಾಟಿ ತೆರಳಬೇಕಾಗಿರುವ ಹಿನ್ನಲೆಯಲ್ಲಿ ಈ ಪ್ರದೇಶಕ್ಕೆ ಸಾರ್ವಜನಿಕರ ಭೇಟಿಯನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ನಿನ್ನೆ ಸಂಜೆಯಿಂದ ವ್ಯಾಪಕ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಇಂದು ಅಂಗನವಾಡಿ ಹಾಗೂ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಕಳೆದ ೨೪ ಗಂಟೆಗಳಲ್ಲಿ ಕರಾವಳಿ ತಾಲೂಕಾದ ಭಟ್ಕಳದಲ್ಲಿ ಅತೀ ಹೆಚ್ಚು ೧೧೪ ಮಿಲಿ ಮೀಟರ್ ಮಳೆ ವರದಿಯಾಗಿದೆ. ಹವಾಮಾನ ಇಲಾಖೆಯಿಂದ ರೆಡ್ ಅಲರ್ಟ್ ಘೋಷಿಸಲಾಗಿದೆ.ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿಯಲ್ಲಿ ಮಳೆ ಮುಂದುವರಿದಿದ್ದು, ನಾಳೆಯವರೆಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಭಾರೀ ಗಾಳಿ ಮಳೆಯ ಪರಿಣಾಮ ಅಲ್ಲಲ್ಲಿ ಹಾನಿಯೂ ಉಂಟಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಭಾರೀ ಗಾಳಿ ಮಳೆಯ ಪರಿಣಾಮವಾಗಿ ಜಿಲ್ಲೆಯಲ್ಲಿ ಅಪಾರ ಹಾನಿ ಉಂಟಾಗಿದೆ. ಎಪ್ರಿಲ್ ೧ರಿಂದ ನಿನ್ನೆಯವರೆಗೆ ಮೇ ೨೮ ಒಟ್ಟು ೨೫೨ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೧೨ ಮನೆಗಳು ಸಂಪೂರ್ಣ ಹಾನಿಗೀಡಾಗಿವೆ. ಉಡುಪಿ ಜಿಲ್ಲೆಯಲ್ಲಿ ಭಾರೀ ಗಾಳಿ-ಮಳೆ ಮುಂದುವರೆದಿದ್ದು, ಇಂದು ಉಡುಪಿ ಜಿಲ್ಲೆಯ ಎಲ್ಲಾ ಅಂಗನವಾಡಿಗಳಿಗೆ ರಜೆ ಘೋಷಿಸಲಾಗಿತ್ತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>